**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಆಯುಕ್ತರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ-ಆಡಳಿತ ವಿಭಾಗಕ್ಕೆ – ಆಯುಕ್ತಾಲಯದ ವೆಬ್‌ಸೈಟ್‌ನಲ್ಲಿ ಸದರಿ ಅಧಿಸೂಚನೆಯನ್ನು ಪ್ರಚುರಪಡಿಸುವುದು.
7. ಡಿವಿಪಿ(2) ವಿಭಾಗಕ್ಕೆ – ಮಾಹಿತಿಗಾಗಿ
8. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

**DTE-ADMI0ACM2/ 20 /2024**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:31-05-2024.

**-:: ಸುತ್ತೋಲೆ ::-**

**ವಿಷಯ:** 2024-25ನೇ ಸಾಲಿನ ಸರ್ಕಾರಿ ಹಾಗೂ ಖಾಸಗಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿ **8ನೇ ತರಗತಿಯ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸುವ ಬಗ್ಗೆ.**

**ಉಲ್ಲೇಖ:**
1. ಪ್ರಾಂಶುಪಾಲರು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಾಗಲಕೋಟೆ ಇವರ ಮನವಿ ಪತ್ರ ಸಂ. ಸಕಿತಾಶಾಬಾ/ಪ್ರವೇಶ/2024-25/12, ದಿ:22-05-2024.
2. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ದಿ:29-04-2024.

************

2024-25ನೇ ಸಾಲಿನ ಸರ್ಕಾರಿ ಹಾಗೂ ಖಾಸಗಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿ 8ನೇ ತರಗತಿಯ ದಾಖಲಾತಿಯನ್ನು ದಿನಾಂಕ:22-05-2024ರ ಒಳಗೆ ಪೂರ್ಣಗೊಳಿಸಲು ಉಲ್ಲೇಖ(2)ರ ಈ ಕಛೇರಿ ಪ್ರವೇಶಾಧಿಸೂಚನೆಯಲ್ಲಿ ಸೂಚಿಸಲಾಗಿತ್ತು.

ಉಲ್ಲೇಖ(1)ರ ಪ್ರಾಂಶುಪಾಲರ ಪತ್ರದಲ್ಲಿ ರಾಜ್ಯದ ಪ್ರಾಥಮಿಕ ಶಾಲೆಗಳಿಗೆ ಬೇಸಿಗೆ ರಜೆ ನೀಡಿರುವುದರಿಂದ, ಸಾರ್ವಜನಿಕ ಶಿಕ್ಷಣ ಇಲಾಖೆಯ ಜ್ಞಾಪನ ಪತ್ರದಂತೆ ಶಾಲಾ ದಾಖಲಾತಿಯನ್ನು ದಿ:30-06-2024ರ ಒಳಗಾಗಿ ಮುಕ್ತಾಯಗೊಳಿಸಲು ಆದೇಶಿಸಿರುವುದರಿಂದ 8ನೇ ತರಗತಿ ಪ್ರವೇಶ ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ. ಈ ಸಂಬಂಧದಲ್ಲಿ ಪ್ರಿನ್ಸಿಪಾಲರ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ **ದಿ:20-06-2024 ರವರೆಗೆ ಅರ್ಜಿ ಸ್ವೀಕರಿಸಿ, ಪ್ರವೇಶಾತಿಯನ್ನು ದಿನಾಂಕ:22-06-2024ರ ಒಳಗೆ ಪೂರ್ಣಗೊಳಿಸಲು ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ,

ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರಿಗೆ,